# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 740**
**ಮಾನ್ಯ ಸದಸ್ಯರ ಹೆಸರು : ಶ್ರೀ ಹೆಚ್.ಎಸ್.ಗೋಪಿನಾಥ್**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)**
**ಉತ್ತರಿಸುವ ದಿನಾಂಕ : 19.03.2025**
**ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು**

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳಿಗೆ ಕೇಂದ್ರ ಸ್ಥಾನದಲ್ಲಿ ಸರ್ಕಾರಿ ಕಛೇರಿ ಇವೆಯೇ; (ವಿವರ ನೀಡುವುದು) | ರಾಜ್ಯದಲ್ಲಿ ಒಟ್ಟು 8302 ಗ್ರಾಮ ಆಡಳಿತ ಅಧಿಕಾರಿಗಳ ವೃತ್ತಗಳಿದ್ದು, ಇದರಲ್ಲಿ 812 ಗ್ರಾಮ ಆಡಳಿತ ಅಧಿಕಾರಿಗಳ ವೃತ್ತಗಳಿಗೆ ಸರ್ಕಾರಿ ಕಛೇರಿ ಇರುತ್ತವೆ. |
| ಆ) | ಈ ಅಧಿಕಾರಿಗಳಿಗೆ ಕಛೇರಿಯಲ್ಲಿ ಇತ್ತೀಚಗೆ ನೀಡುವ ಕೆಲಸಗಳಿಂದ E-office ಮತ್ತು ಮೊಬೈಲ್ ಆಪ್ ಗಳಲ್ಲಿ ಮಾಡುವಂತಹ ಕೆಲಸಗಳಿಗೆ ಮೂಲಭೂತ ಸೌಕರ್ಯ ನೀಡಲಾಗಿದೆಯೇ; | 2024-25ನೇ ಸಾಲಿನ ಆಯವ್ಯಯದ ಕಂಡಿಕೆ ಸಂಖ್ಯೆ:399 ರಲ್ಲಿ ಘೋಷಿಸಿರುವಂತೆ ಡಿ.ಜಿ. ಕಂದಾಯ ಯೋಜನೆಯಡಿ ಗ್ರಾಮ ಆಡಳಿತ ಅಧಿಕಾರಿಗಳಿಗೆ Laptop ವಿತರಣೆ ಮಾಡುವ ಉದ್ದೇಶ ಹೊಂದಿದ್ದು, ಈಗಾಗಲೇ 4000 Laptop ಖರೀದಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |
| ಇ) | ಸದರಿ ಅಧಿಕಾರಿಗಳ ಬಳಿ ಪಹಣಿಗೆ ಆಧಾರ ಲಿಂಕ್ ಮಾಡಿಸುತ್ತಿದ್ದು, ಈ ಬಗ್ಗೆ ಯಾವುದಾದರೂ ಸರ್ಕಾರಿ ಆದೇಶ ಹೊರಡಿಸಲಾಗಿದೆಯೇ; ಹಾಗೂ ಇದರಿಂದ ಸಾರ್ವಜನಿಕರಿಗೆ ಆಗುವ ಉಪಯೋಗಗಳ ಮಾಹಿತಿಯನ್ನು ಅಧಿಕೃತವಾಗಿ ಪ್ರಚಾರ ಪಡಿಸಿದೆಯೇ; (ವಿವರ ನೀಡುವುದು) | ಆಯುಕ್ತರು, ಕಂದಾಯ ಆಯುಕ್ತಾಲಯ ಇವರ ಪತ್ರ ಸಂಖ್ಯೆ:RC-BMCOTECH(btmb)/91/2023 E 1252325, ದಿನಾಂಕ:12.02.2024ರಲ್ಲಿ ಪಹಣಿಗಳಿಗೆ ಆಧಾರ್ ಸೀಡಿಂಗ್ ಮಾಡಲು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆಗಳನ್ನು ನೀಡಲಾಗಿರುತ್ತದೆ ಹಾಗೂ ಸದರಿ ಕಾರ್ಯಕ್ರಮದ ಕುರಿತು ಪತ್ರಿಕಾ ಪ್ರಕಟಣೆ ಹಾಗೂ ಗ್ರಾಮ ಹಂತದಲ್ಲಿ ಟಾಂ ಟಾಂ ಮೂಲಕ ಪ್ರಚಾರ ಪಡಿಸಲಾಗಿರುತ್ತದೆ. |
| ಈ) | ಗ್ರಾಮ ಆಡಳಿತ ಅಧಿಕಾರಿಗಳಿಗೆ ಕಾಲ ಕಾಲಕ್ಕೆ ಮುಂಬಡ್ತಿ ನೀಡಲಾಗುತ್ತಿದೆಯೇ? (ವಿವರಿಸುವುದು) | ಗ್ರಾಮ ಆಡಳಿತ ಅಧಿಕಾರಿ ಮತ್ತು ದ್ವಿತೀಯ ದರ್ಜೆ ಸಹಾಯಕರ ಸಂಯುಕ್ತ ಜೇಷ್ಠತಾ ಪಟ್ಟಿಯನ್ವಯ ಮುಂಬಡ್ತಿ ನೀಡಲು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಕಂಇ 20 ಬಿಎಸ್ಐ 2021, ದಿನಾಂಕ:21.10.2021ರಲ್ಲಿ ತಿದ್ದುಪಡಿಯನ್ನು ತರಲಾಗಿರುತ್ತದೆ. ಸದರಿ ತಿದ್ದುಪಡಿಯನ್ನು ಪ್ರಶ್ನಿಸಿ ಶ್ರೀ ಸುಧೀರ ನಾಯಕ ಮತ್ತು ಇತರರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಿರುವ ರಿಟ್ ಅರ್ಜಿ ಸಂಖ್ಯೆ:329/2023 ಮಾನ್ಯ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿದ್ದು, ನ್ಯಾಯಾಲಯದ ಮಧ್ಯಂತರ ಆದೇಶದ ಹಿನ್ನೆಲೆಯಲ್ಲಿ ಮುಂಬಡ್ತಿಯನ್ನು ತಾತ್ಕಾಲಿಕವಾಗಿ ತಡೆಹಿಡಿಯಲಾಗಿರುತ್ತದೆ. |

**ಸಂಖ್ಯೆ: ಕಂಇ 70 ಬಿಎಸ್‌ಸಿ 2025**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು